ಲೂಕನು 17:5 ಆಗ ಅಪೋಸ್ತಲರು ಕರ್ತನಿಗೆ--ನಮ್ಮ ನಂಬಿಕೆ ಯನ್ನು ಹೆಚ್ಚಿಸು ಅಂದರು.

ರೋಮಾಪುರದವರಿಗೆ 10:17 ಕೇಳುವದರಿಂದ ನಂಬಿಕೆಯುಂಟಾಗುತ್ತದೆ. ದೇವರ ವಾಕ್ಯವನ್ನು ಕೇಳುವದ ರಿಂದಲೇ.

ಲೂಕನು 11:1 ಇದಾದ ಮೇಲೆ ಆತನು ಒಂದಾನೊಂದು ಸ್ಥಳದಲ್ಲಿ ಪ್ರಾರ್ಥನೆ ಮಾಡಿ ಮುಗಿಸಿದ ಮೇಲೆ ಆತನ ಶಿಷ್ಯರಲ್ಲಿ ಒಬ್ಬನು ಆತನಿಗೆ--ಕರ್ತನೇ, ಯೋಹಾನನು ತನ್ನ ಶಿಷ್ಯರಿಗೆ ಕಲಿಸಿದ ಹಾಗೆಯೇ ನಮಗೂ ಪ್ರಾರ್ಥನೆ ಮಾಡುವದಕ್ಕೆ ಕಲಿಸು ಎಂದು ಕೇಳಲು

1 ತಿಮೊಥೆಯನಿಗೆ 2:1-4 ಎಲ್ಲಾದಕ್ಕಿಂತ ಮೊದಲು ಮನುಷ್ಯರೆಲ್ಲರಿ ಗೋಸ್ಕರವೂ ಅರಸರುಗಳಿಗಾಗಿಯೂ ಎಲ್ಲಾ ಅಧಿಕಾರಿಗಳಿಗಾಗಿಯೂ ವಿಜ್ಞಾಪನೆಗಳನ್ನೂ ಪ್ರಾರ್ಥನೆಗಳನ್ನೂ ಮನವೆಗಳನ್ನೂ ಕೃತಜ್ಞತಾಸ್ತುತಿ ಗಳನ್ನೂ ಮಾಡಬೇಕೆಂದು ಎಚ್ಚರಿಸುತ್ತೇನೆ. 2 ಹೀಗೆ ನಾವು ಶಾಂತಿ ಸಮಾಧಾನಗಳಿಂದ ಕೂಡಿದ ಜೀವನ ವನ್ನು ಪೂರ್ಣ ಭಕ್ತಿಯಿಂದಲೂ ಗೌರವದಿಂದಲೂ ನಡಿಸುವದಕ್ಕಾಗುವದು. 3 ಯಾಕಂದರೆ ಇದು ನಮ್ಮ ರಕ್ಷಕನಾದ ದೇವರ ದೃಷ್ಟಿಯಲ್ಲಿ ಒಳ್ಳೇದಾಗಿಯೂ ಅಂಗೀಕರಿಸತಕ್ಕದ್ದಾಗಿಯೂ ಅದೆ. 4 ಎಲ್ಲಾ ಮನುಷ್ಯರು ರಕ್ಷಣೆಯನ್ನು ಹೊಂದಿ ಸತ್ಯದ ಜ್ಞಾನಕ್ಕೆ ಸೇರ ಬೇಕೆಂಬದು ಆತನ ಚಿತ್ತವಾಗಿದೆ.

ಜೆಕರ್ಯ 3:1,2 ಇದಲ್ಲದೆ ಆತನು ನನಗೆ--ಕರ್ತನ ದೂತನ ಮುಂದೆ ನಿಂತಿರುವ ಪ್ರಧಾನ ಯಾಜಕನಾದ ಯೆಹೋಶುವನನ್ನೂ ಅವನನ್ನು ಎದುರಿಸುವದಕ್ಕೆ ಅವನ ಬಲಪಾರ್ಶ್ವದಲ್ಲಿ ನಿಂತ ಸೈತಾನನನ್ನೂ ತೋರಿಸಿದನು. 2 ಆಗ ಕರ್ತನ ದೂತನು ಸೈತಾನನಿಗೆ--ಸೈತಾನನೇ, ಕರ್ತನು ನಿನ್ನನ್ನು ಗದರಿಸಲಿ; ಹೌದು,

ಯೆರೂಸಲೇಮನ್ನು ಆದುಕೊಂಡ ಕರ್ತನು ನಿನ್ನನ್ನು ಗದರಿಸಲಿ; ಅದು ಬೆಂಕಿಯೊಳಗಿಂದ ಎಳೆದ ಕೊಳ್ಳಿಯಾಗಿದೆಯಲ್ಲವೋ ಅಂದನು.

ಎಫೆಸದವರಿಗೆ 6:12 ನಾವು ಹೋರಾಡುವದು ಮನುಷ್ಯಮಾತ್ರದವರ ಸಂಗಡವಲ್ಲ; ರಾಜತ್ವಗಳ ಮೇಲೆಯೂ ಅಧಿಕಾರಿಗಳ ಮೇಲೆಯೂ ಈ ಲೋಕದ ಅಂಧಕಾರದ ಅಧಿಪತಿಗಳ ಮೇಲೆಯೂ ಆಕಾಶಮಂಡಲದಲ್ಲಿರುವ ದುರಾತ್ಮಗಳ ದುಷ್ಟತನದ ಮೇಲೆಯೂ ಹೋರಾಡುವವರಾಗಿದ್ದೇವೆ.

ಎಫೆಸದವರಿಗೆ 6:10,11 ಕಡೇದಾಗಿ ನನ್ನ ಸಹೋದರರೇ, ಕರ್ತನಲ್ಲಿಯೂ ಆತನ ಅತ್ಯಧಿಕವಾದ ಶಕ್ತಿಯಲ್ಲಿಯೂ ಬಲಗೊಳ್ಳಿರಿ. 11 ನೀವು ಸೈತಾನನ ತಂತ್ರೋಪಾಯಗಳನ್ನು ಎದುರಿಸಿ ನಿಲ್ಲುವದಕ್ಕೆ ಶಕ್ತರಾಗುವಂತೆ ದೇವರ ಸರ್ವಾಯುಧ ಗಳನ್ನು ಧರಿಸಿಕೊಳ್ಳಿರಿ.

ಎಫೆಸದವರಿಗೆ 6:13-17 ಆದದ ರಿಂದ ಕೆಟ್ಟ ದಿನದಲ್ಲಿ ನೀವು ಅವುಗಳನ್ನು ಎದುರಿಸಿ ಮಾಡಬೇಕಾದದ್ದೆಲ್ಲವನ್ನು ಮಾಡಿ ನಿಲ್ಲಲು ಶಕ್ತರಾಗು ವಂತೆ ದೇವರ ಸರ್ವಾಯುಧವನ್ನು ನಿಮಗಾಗಿ ತೆಗೆದು ಕೊಳ್ಳಿರಿ. 14 ಸತ್ಯವೆಂಬ ನಡುಕಟ್ಟನ್ನು ಕಟ್ಟಿಕೊಂಡು ನೀತಿಯೆಂಬ ಎದೆಕವಚವನ್ನು ಧರಿಸಿಕೊಳ್ಳಿರಿ.ಸಮಾಧಾನದ ವಿಷಯವಾದ ಸುವಾರ್ತೆಯನ್ನು ತಿಳಿಸುವದರಲ್ಲಿ ಸಿದ್ಧವಾದ ಮನಸ್ಸೆಂಬ ಕೆರಗಳನ್ನು ಮೆಟ್ಟಿಕೊಂಡು ನಿಲ್ಲಿರಿ. 15 ಸಮಾಧಾನದ ವಿಷಯವಾದ ಸುವಾರ್ತೆಯನ್ನು ತಿಳಿಸುವದರಲ್ಲಿ ಸಿದ್ಧವಾದ ಮನಸ್ಸೆಂಬ ಕೆರಗಳನ್ನು ಮೆಟ್ಟಿಕೊಂಡು ನಿಲ್ಲಿರಿ. 16 ಎಲ್ಲಾದಕ್ಕಿಂತ ಹೆಚ್ಚಾಗಿ ನಂಬಿಕೆ ಯೆಂಬ ಗುರಾಣಿಯನ್ನು ಹಿಡುಕೊಳ್ಳಿರಿ. ಆದರಿಂದ ನೀವು ಕೆಡುಕನ ಅಗ್ನಿಬಾಣಗಳನ್ನೆಲ್ಲಾ ಆರಿಸುವದಕ್ಕೆ ಶಕ್ತರಾಗುವಿರಿ. 17 ಇದಲ್ಲದೆ ರಕ್ಷಣೆಯೆಂಬ ಶಿರಸ್ತ್ರಾಣ ವನ್ನು ಇಟ್ಟುಕೊಂಡು ಆತ್ಮನು ಕೊಡುವ ದೇವರ ವಾಕ್ಯವೆಂಬ ಕತ್ತಿಯನ್ನು ಹಿಡಿಯಿರಿ.

ಇಬ್ರಿಯರಿಗೆ 4:12 ಯಾಕಂದರೆ ದೇವರ ವಾಕ್ಯವು ಸಜೀವ ವಾದದ್ದು, ಶಕ್ತಿಯುಳ್ಳದ್ದು,

ಯಾವ ಇಬ್ಬಾಯಿ ಕತ್ತಿ ಗಿಂತಲೂ ಹದವಾದದ್ದು, ಪ್ರಾಣ ಆತ್ಮಗಳನ್ನೂ ಕೀಲು ಮಜ್ಜೆಗಳನ್ನೂ ವಿಭಾಗಿಸುವಷ್ಟರ ಮಟ್ಟಿಗೆ ತೂರಿ ಹೋಗುವಂಥದ್ದೂ ಹೃದಯದ ಆಲೋಚನೆಗಳನ್ನೂ ಉದ್ದೇಶಗಳನ್ನೂ ವಿವೇಚಿಸುವಂಥದ್ದೂ ಆಗಿದೆ.

ಲೂಕನು 4:8 ಯೇಸು ಅವನಿಗೆ ಪ್ರತ್ಯುತ್ತರವಾಗಿ--ಸೈತಾನನೇ, ನನ್ನ ಹಿಂದೆ ಹೋಗು; ಯಾಕಂದರೆ--ನೀನು ನಿನ್ನ ದೇವರಾದ ಕರ್ತನನ್ನು ಆರಾಧಿಸಿ ಆತನೊಬ್ಬನನ್ನೇ ಸೇವಿಸತಕ್ಕದ್ದು ಎಂದು ಬರೆದದೆ ಅಂದನು.

ಎಫೆಸದವರಿಗೆ 6:18 ನೀವು ಆತ್ಮ ಪ್ರೇರಿತರಾಗಿ ಎಲ್ಲಾ ಸಮಯಗಳಲ್ಲಿ ಸಕಲವಿಧ ವಾದ ಪ್ರಾರ್ಥನೆಯಿಂದಲೂ ವಿಜ್ಞಾಪನೆಯಿಂದಲೂ ಪ್ರಾರ್ಥಿಸಿರಿ. ಇದರಲ್ಲಿ ಪೂರ್ಣ ಸ್ಥಿರಚಿತ್ತರಾಗಿದ್ದು ಪರಿಶುದ್ಧರೆಲ್ಲರ ವಿಷಯದಲ್ಲಿ ವಿಜ್ಞಾಪನೆಮಾಡುತ್ತಾ ಎಚ್ಚರವಾಗಿರ್ರಿ.

1 ಸಮುವೇಲನು 17:45-47 ಆಗ ದಾವೀದನು ಫಿಲಿಷ್ಟಿಯನಿಗೆ--ನೀನು ಕತ್ತಿ ಈಟಿಯ ಗುರಾಣಿಯ ಸಂಗಡ ನನ್ನ ಬಳಿಗೆ ಬರುತ್ತೀ; ಆದರೆ ನೀನು ನಿಂದಿಸಿದ ಇಸ್ರಾಯೇ ಲಿನ ಸೈನ್ಯಗಳ ದೇವರಾದಂಥ ಸೈನ್ಯಗಳ ಕರ್ತನ ಹೆಸರಿ ನಲ್ಲಿ ನಾನು ನಿನ್ನ ಬಳಿಗೆ ಬರುತ್ತೇನೆ. 46 ಕರ್ತನು ನಿನ್ನನ್ನು ನನ್ನ ಕೈಯಲ್ಲಿ ಒಪ್ಪಿಸಿಕೊಡುವನು; ನಾನು ನಿನ್ನನ್ನು ಹೊಡೆದುಬಿಟ್ಟು ನಿನ್ನ ತಲೆಯನ್ನು ತೆಗೆದು ಫಿಲಿಷ್ಟಿಯರ ದಂಡಿನ ಹೆಣಗಳನ್ನು ಈ ದಿನ ಆಕಾಶದ ಪಕ್ಷಿಗಳಿಗೂ ಅಡವಿಯ ಮೃಗಗಳಿಗೂ ಆಹಾರವಾಗಿ ಕೊಡುವೆನು. 47 ಈ ದಿನ ಇಸ್ರಾಯೇಲ್ಯರೊಳಗೆ ದೇವರು ಇದ್ದಾನೆಂದು ಭೂಲೋಕದವರೆಲ್ಲರೂ ತಿಳಿ ಯುವರು. ಕರ್ತನು ಕತ್ತಿಯಿಂದಲೂ ಈಟಿಯಿಂದಲೂ ರಕ್ಷಿಸುವದಿಲ್ಲ ಎಂದು ಈ ಸಭೆಯೆಲ್ಲಾ ತಿಳಿದುಕೊಳ್ಳು ವದು; ಯಾಕಂದರೆ ಯುದ್ಧವು ಕರ್ತನದು; ಆತನು ನಿಮ್ಮನ್ನು ನಮ್ಮ ಕೈಯಲ್ಲಿ ಒಪ್ಪಿಸಿಕೊಡುವನು ಅಂದನು.

ಲೂಕನು 10:17-20 ತರುವಾಯ ಆ ಎಪ್ಪತ್ತು ಮಂದಿ ಸಂತೋಷದಿಂದ ಹಿಂತಿರುಗಿ--ಕರ್ತನೇ, ನಿನ್ನ ಹೆಸರಿನಲ್ಲಿ ದೆವ್ವಗಳು ಸಹ ನಮಗೆ ಅಧೀನವಾದವು ಅಂದರು. 18 ಆಗ ಆತನು ಅವರಿಗೆ--ಸೈತಾನನು ಮಿಂಚಿನ ಹಾಗೆ ಆಕಾಶದಿಂದ ಬೀಳುವದನ್ನು

ನಾನು ನೋಡಿದೆನು. 19 ಇಗೋ, ಸರ್ಪಗಳನ್ನೂ ಚೇಳುಗಳನ್ನೂ ತುಳಿಯುವದಕ್ಕೆ ಮತ್ತು ವಿರೋಧಿಯ ಎಲ್ಲಾ ಶಕ್ತಿಯ ಮೇಲೆ ನಾನು ನಿಮಗೆ ಅಧಿಕಾರ ಕೊಡುತ್ತೇನೆ; ಯಾವದೂ ಯಾವ ರೀತಿಯಲ್ಲಿಯೂ ನಿಮಗೆ ಕೇಡು ಮಾಡ ಲಾರದು. 20 ಆದಾಗ್ಯೂ ದುರಾತ್ಮಗಳು ನಿಮಗೆ ಅಧೀನವಾದವೆಂದು ಸಂತೋಷಪಡಬೇಡಿರಿ; ಆದರೆ ನಿಮ್ಮ ಹೆಸರುಗಳು ಪರಲೋಕದಲ್ಲಿ ಬರೆಯಲ್ಪಟ್ಟಿರು ವದರಿಂದಲೇ ಸಂತೋಷಿಸಿರಿ ಅಂದನು.

2 ಕೊರಿಂಥದವರಿಗೆ 10:3-5 ನಾವು ಶರೀರದಲ್ಲಿ ನಡ ಕೊಳ್ಳುವವರಾದರೂ ಶರೀರ ಪ್ರಕಾರವಾಗಿ ಯುದ್ಧ ಮಾಡುವವರಲ್ಲ. 4 (ನಾವು ಉಪಯೋಗಿಸುವ ಯುದ್ಧಾಯುಧಗಳು ಶರೀರ ಸಂಬಂಧವಾದ ಆಯುಧ ಗಳಲ್ಲ; ಅವು ದೇವರ ಮೂಲಕ ಬಲವಾಗಿದ್ದು ಬಲ ವಾದ ಕೋಟೆಗಳನ್ನು ಕೆಡವಿಹಾಕುವಂಥವುಗಳಾಗಿವೆ). 5 ನಾವು ಊಹೆಗಳನ್ನು ದೇವಜ್ಞಾನವನ್ನೂ ವಿರೋಧಿ ಸುವದಕ್ಕೆ ಏರಿಸಲ್ಪಟ್ಟಿರುವ ಉನ್ನತವಾದವುಗಳೆಲ್ಲವನ್ನೂ ಕೆಡವಿಹಾಕಿ ಎಲ್ಲಾ ಯೋಚನೆಗಳನ್ನು ಕ್ರಿಸ್ತನಿಗೆ ವಿಧೇಯವಾಗುವಂತೆ ಸೆರೆಹಿಡಿದು

2 ತಿಮೊಥೆಯನಿಗೆ 1:7 ದೇವರು ನಮಗೆ ಕೊಟ್ಟಿರುವ ಆತ್ಮವು ಬಲ ಪ್ರೀತಿ ಸ್ವಸ್ಥಬುದ್ಧಿಯ ಆತ್ಮವೇ ಹೊರತು ಭಯದ ಆತ್ಮವಲ್ಲ.

ಮತ್ತಾಯನು 12:28,29 ಆದರೆ ನಾನು ದೇವರ ಆತ್ಮನಿಂದ ದೆವ್ವಗಳನ್ನು ಬಿಡಿಸಿದರೆ ದೇವರ ರಾಜ್ಯವು ನಿಮ್ಮ ಬಳಿಗೆ ಬಂದಿದೆಯಲ್ಲಾ. 29 ಇಲ್ಲವೆ ಯಾವನಾದರೂ ಮೊದಲು ಬಲವುಳ್ಳ ಮನುಷ್ಯನನ್ನು ಕಟ್ಟಿಹಾಕದ ಹೊರತು ಅವನ ಮನೆ ಯನ್ನು ಪ್ರವೇಶಿಸಿ ಅವನ ಸೊತ್ತನ್ನು ಸುಲುಕೊಳ್ಳು ವದಕ್ಕಾದೀತೇ? ಕಟ್ಟಿದ ಮೇಲೆ ಅವನ ಮನೆಯನ್ನು ಸುಲುಕೊಳ್ಳುವದಕ್ಕಾಗುವದು.

ಎಫೆಸದವರಿಗೆ 1:13 ನಿಮ್ಮ ರಕ್ಷಣೆಯ ವಿಷಯವಾದ ಸುವಾರ್ತೆಯೆಂಬ ಸತ್ಯ ವಾಕ್ಯವನ್ನು ಕೇಳಿ ಕ್ರಿಸ್ತನಲ್ಲಿ ನಂಬಿಕೆಯಿಟ್ಟವರಾದ ನೀವು ಸಹ ವಾಗ್ದಾನ ಮಾಡಲ್ಪಟ್ಟ

ಪವಿತ್ರಾತ್ಮನೆಂಬ ಮುದ್ರೆಯನ್ನು ಹೊಂದಿದಿರಿ.

ಅಪೊಸ್ತಲರ ಕೃತ್ಯಗ 19:6 ಆಗ ಪೌಲನು ಅವರ ಮೇಲೆ ಕೈಗಳನ್ನಿಡಲು ಪವಿತ್ರಾತ್ಮನು ಅವರ ಮೇಲೆ ಬಂದನು; ಅವರು ಭಾಷೆಗಳನ್ನಾಡಿದರು ಮತ್ತು ಪ್ರವಾದಿಸಿದರು.

ಮಾರ್ಕನು 16:15-18 ಆತನು ಅವರಿಗೆ--ನೀವು ಸಮಸ್ತ ಲೋಕಕ್ಕೆ ಹೋಗಿ ಎಲ್ಲಾ ಸೃಷ್ಟಿಗೆ ಸುವಾರ್ತೆಯನ್ನು ಸಾರಿರಿ. 16 ನಂಬಿ ಬಾಪ್ತಿಸ್ಮ ಮಾಡಿಸಿಕೊಳ್ಳುವವನು ರಕ್ಷಣೆ ಹೊಂದುವನು. ಆದರೆ ನಂಬದೆ ಹೋಗುವವನು ದಂಡನೆಗೆ ಗುರಿಯಾಗುವನು. 17 ಇದಲ್ಲದೆ ನಂಬುವವರಿಂದ ಈ ಸೂಚಕಕಾರ್ಯಗಳು ಉಂಟಾಗುವವು; ಅವರು ನನ್ನ ಹೆಸರಿನಲ್ಲಿ ದೆವ್ವಗಳನ್ನು ಬಿಡಿಸುವರು; ಅವರು ಹೊಸ ಭಾಷೆಗಳಲ್ಲಿ ಮಾತನಾಡುವರು; 18 ಅವರು ಸರ್ಪಗಳನ್ನು ಎತ್ತುವರು; ಮರಣಕರವಾದದ್ದೇ ನಾದರೂ ಕುಡಿದರೆ ಅದು ಅವರಿಗೆ ಯಾವ ಕೇಡನ್ನೂ ಮಾಡುವದಿಲ್ಲ; ಅವರು ರೋಗಿಗಳ ಮೇಲೆ ಕೈಗಳನ್ನಿಡು ವಾಗ ಅವರು ಸ್ವಸ್ಥರಾಗುವರು ಎಂದು ಹೇಳಿದನು.

1 ಯೋಹಾನನು 1:9 ನಾವು ನಮ್ಮ ಪಾಪಗಳನ್ನು ಅರಿಕೆ ಮಾಡಿದರೆ ಆತನು ನಂಬಿಗಸ್ತನೂ ನೀತಿವಂತನೂ ಆಗಿರುವದರಿಂದ ನಮ್ಮ ಪಾಪಗಳನ್ನು ಕ್ಷಮಿಸಿಬಿಟ್ಟು ಸಕಲ ಅನೀತಿಯಿಂದ ನಮ್ಮನ್ನು ಶುದ್ಧಿ ಮಾಡುವನು.

ವಿಮೋಚನಕಾಂಡ 20:5 ನೀನು ಅವುಗಳಿಗೆ ಅಡ್ಡಬೀಳಬಾರದು, ಸೇವಿಸಲೂ ಬಾರದು. ನಿನ್ನ ದೇವರಾದ ಕರ್ತನಾಗಿರುವ ನಾನು ರೋಷವುಳ್ಳ ದೇವರಾಗಿದ್ದೇನೆ. ನನ್ನನ್ನು ಹಗೆ ಮಾಡುವ ತಂದೆಗಳ ಅಪರಾಧವನ್ನು ಮಕ್ಕಳ ಮೇಲೆ ಯೂ ಮೂರನೆಯ ನಾಲ್ಕನೆಯ ತಲೆಗಳ ವರೆಗೂ ಬರಮಾಡುವೆನು.

ಕೀರ್ತನೆಗಳು 109:17 ಅವನು ಶಾಪವನ್ನು ಪ್ರೀತಿ ಮಾಡಿದನು; ಅದು ಅವನಿಗೆ ಬರಲಿ. ಆಶೀರ್ವಾದಕ್ಕೆ ಮೆಚ್ಚಲಿಲ್ಲ; ಅದು ಅವನಿಗೆ ದೂರವಾಗಿರಲಿ.

ನ್ಯಾಯಸ್ಥಾಪಕರು 16:16 ಅವಳು ಅವನನ್ನು ದಿನದಿನವೂ ತನ್ನ ಮಾತುಗಳಿಂದ ಪೀಡಿಸಿ ತೊಂದರೆಪಡಿಸಿದ್ದರಿಂದ ಅವನ ಪ್ರಾಣವು ಸಾಯು ವಷ್ಟು ವ್ಯಸನಪಟ್ಟಿತು.

ಎಫೆಸದವರಿಗೆ 4:26 ಕೋಪಮಾಡಬೇಕಾದರೂ ಪಾಪ ಮಾಡಬೇಡಿರಿ; ಸೂರ್ಯನು ಮುಳುಗುವದಕ್ಕಿಂತ ಮುಂಚೆ ನಿಮ್ಮ ಸಿಟ್ಟು ತೀರಲಿ;

ರೋಮಾಪುರದವರಿಗೆ 14:12 ಹೀಗಿರಲಾಗಿ ನಮ್ಮಲ್ಲಿ ಪ್ರತಿಯೊಬ್ಬನು ತನ್ನ ತನ್ನ ವಿಷಯವಾಗಿ ದೇವರಿಗೆ ಲೆಕ್ಕ ಒಪ್ಪಿಸಬೇಕು.

1 ಯೋಹಾನನು 2:23 ಯಾವನು ಮಗನನ್ನು ಅಲ್ಲಗಳೆ ಯುವನೋ ಅವನು ತಂದೆಗೆ ಸೇರಿದವನಲ್ಲ; ಯಾವನು ಮಗನನ್ನು ಒಪ್ಪಿಕೊಳ್ಳುವನೋ ಅವನು ತಂದೆಗೂ ಸೇರಿದವನಾಗಿದ್ದಾನೆ.

ಯೋಹಾನನು 14:6 ಯೇಸು ಅವನಿಗೆ--ನಾನೇ ಮಾರ್ಗವೂ ಸತ್ಯವೂ ಜೀವವೂ ಆಗಿದ್ದೇನೆ; ನನ್ನ ಮೂಲಕವಾಗಿ ಹೊರತು ಯಾರೂ ತಂದೆಯ ಬಳಿಗೆ ಬರುವದಿಲ್ಲ.

ಮತ್ತಾಯನು 11:28-30 ಕಷ್ಟಪಡುವವರೇ ಮತ್ತು ಭಾರಹೊತ್ತವರೇ, ನೀವೆಲ್ಲರೂ ನನ್ನ ಬಳಿಗೆ ಬನ್ನಿರಿ, ನಾನು ನಿಮಗೆ ವಿಶ್ರಾಂತಿಯನ್ನು ಕೊಡುವೆನು. 29 ನನ್ನ ನೊಗವನ್ನು ನಿಮ್ಮ ಮೇಲೆ ತೆಗೆದುಕೊಂಡು ನನ್ನಿಂದ ಕಲಿತು ಕೊಳ್ಳಿರಿ; ಯಾಕಂದರೆ ನಾನು ಸಾತ್ವಿಕನೂ ದೀನ ಮನಸ್ಸುಳ್ಳವನೂ ಆಗಿರುವದರಿಂದ ನೀವು ನಿಮ್ಮ ಆತ್ಮಗಳಿಗೆ ವಿಶ್ರಾಂತಿಯನ್ನು ಕಂಡುಕೊಳ್ಳುವಿರಿ. 30 ಯಾಕಂದರೆ ನನ್ನ ನೊಗವು ಮೃದುವಾದದ್ದೂ ನನ್ನ ಹೊರೆಯು ಹಗುರವಾದದ್ದೂ ಆಗಿದೆ ಎಂದು ಹೇಳಿದನು.

2 ಕೊರಿಂಥದವರಿಗೆ 6:2 (ಆತನು--ಅಂಗೀಕಾರದ ಸಮಯದಲ್ಲಿ ನಾನು ನಿನ್ನ ಮನವಿಯನ್ನು ಕೇಳಿದೆನು, ರಕ್ಷಣೆಯ ದಿನದಲ್ಲಿ ನಾನು ನಿನಗೆ ಸಹಾಯಮಾಡಿದೆನು ಎಂದು ಹೇಳುತ್ತಾನೆ; ಇಗೋ, ಈಗಲೇ ಆ ಅಂಗೀಕಾರದ ಸಮಯ; ಇಗೋ, ಈಗಲೇ ಆ ರಕ್ಷಣೆಯ ದಿನ).

ರೋಮಾಪುರದವರಿಗೆ 10:13 ಕರ್ತನ ನಾಮದಲ್ಲಿ ಬೇಡಿಕೊಳ್ಳುವ ಯಾರಿಗಾದರೂ ರಕ್ಷಣೆ ಯಾಗುವದು.